# ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆಗೆ ಚಾಲನೆ

10/5/15 SK

**ಧಾರವಾಡ**

ಕೇಂದ್ರ ಸರಕಾರ ಜಾರಿಗೆ ತಂದಿರುವ ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆ ದೇಶದ ಸಾಮಾನ್ಯ ವ್ಯಕ್ತಿ ಸಹ ಗೌರವಯುತ ಜೀವನ ನಡೆಸುವುದಕ್ಕೆ ಸಹಕಾರಿಯಾಗಿವೆ ಎಂದು ಬೃಹತ್ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ರಾಜ್ಯ ಸಚಿವ ಜಿ.ಎಂ. ಸಿದ್ದೇಶ್ವರ ಹೇಳಿದರು.

ಧಾರವಾಡದ ಜಿ.ಪಂ. ಸಭಾಭವನದಲ್ಲಿ ಶನಿವಾರ ಸಂಜೆ ಕೇಂದ್ರ ಸರಕಾರದ ನೂತನ ಯೋಜನೆಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು,



ಧಾರವಾಡ ಜಿ.ಪಂ. ಸಭಾಭವನದಲ್ಲಿ ನಡೆದ ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆ ಕಾರ್ಯಕ್ರಮವನ್ನು ಕೇಂದ್ರ ಸಚಿವ ಜಿ.ಎಂ. ಸಿದ್ದೇಶ್ವರ ಉದ್ಘಾಟಿಸಿದರು.

ಈ ಯೋಜನೆ ಅಡಿ ಬರುವ ವ್ಯಕ್ತಿ ಸಾವನ್ನಪ್ಪಿದರೆ ಅವರ ವಾರಸುದಾರರಿಗೆ ತಕ್ಷಣವೇ 5 ಲಕ್ಷ ರೂ.ಗಳ ಪರಿಹಾರ ದೊರೆಯಲಿದೆ. ಕಾರಣ ಪ್ರತಿಯೊಬ್ಬ ವ್ಯಕ್ತಿ ಈ ಯೋಜನೆಯಡಿ ಬರಬೇಕು ಎಂದರು. ಶ್ರೀಸಾಮಾನ್ಯರನ್ನು ದೃಷ್ಟಿಯಲ್ಲಿಟ್ಟುಕೊಂಡು ಪ್ರಧಾನಿ ನರೇಂದ್ರ ಮೋದಿ ಅವರ ಕನಸಿನ ಕೂಸಾಗಿ ಜಾರಿಗೆ ಬಂದಿರುವ ಯೋಜನೆಗಳ ಕುರಿತು ಪ್ರತಿ ಗ್ರಾಮದಲ್ಲೂ ಪ್ರಚಾರ ನಡೆಯಬೇಕಿದೆ. ಈ ನಿಟ್ಟಿನಲ್ಲಿ ಬ್ಯಾಂಕ್ ಅಧಿಕಾರಿಗಳು, ಸಿಬ್ಬಂದಿ ಆಸ್ಥೆ ವಹಿಸಬೇಕು ಎಂದು ತಿಳಿಸಿದರು. ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ ಮಾತನಾಡಿ, ಅತೀ ಕಡಿಮೆ ಪ್ರೀಮಿಯಮ್‌ನಲ್ಲಿ ಅಧಿಕ ಮೊತ್ತದ ಪರಿಹಾರ ದೊರೆಯಲಿದೆ. ಜನಪರ ಯೋಜನೆಯ ಲಾಭ ನೇರವಾಗಿ ದೊರೆಯಲಿದೆ. ಸಾಮಾನ್ಯ ವ್ಯಕ್ತಿಗೂ ಹೊರೆಯಾಗದಂತೆ ಯೋಜನೆ ರೂಪಿಸಲಾಗಿದೆ. ಈ ಕುರಿತು ಪ್ರತಿಯೊಬ್ಬ ವ್ಯಕ್ತಿ ಗಮನ ಹರಿಸಬೇಕು ಎಂದರು.

ಶಾಸಕ ಅರವಿಂದ ಬೆಲ್ಲದ ಅಧ್ಯಕ್ಷತೆ ವಹಿಸಿದ್ದರು. ಮಹಾಪೌರ ಅಶ್ವಿನಿ ಮಜ್ಜಗಿ, ಜಿ.ಪಂ. ಅಧ್ಯಕ್ಷ ಟಿ.ಜಿ. ಬಾಲಣ್ಣವರ, ಜಿಲ್ಲಾಧಿಕಾರಿ ರಾಜೇಂದ್ರ ಚೋಳನ್, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಮಣದೀಪ ಚೌಧರಿ ಉಪಸ್ಥಿತರಿದ್ದರು.